ವಿಷಯ: ಕೆ.ಎಸ್.ಆರ್.ಟಿ.ಸಿ. ಸಂಸ್ಥೆಯಲ್ಲಿ ಡ್ರೈವರ್ಸ್ ಮತ್ತು ಕಂಡಕ್ಟರ್ಸ್ ಹುದ್ದೆಗಳ ಭರ್ತಿ.

2670 (3300)

ಶ್ರೀ ರಾಮಲಿಂಗಾರೆಡ್ಡಿ (ಜಯನಗರ): ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಹಾಲಿ ಕೆಲಸ ಮಾಡುತ್ತಿರುವ ನಿರ್ವಾಹಕ ಹಾಗೂ ಚಾಲಕರುಗಳ ಸಂಖ್ಯೆ ಎಷ್ಟು?

ಆ) ಈ ಸಂಸ್ಥೆಯಲ್ಲಿ ಹೊಸದಾಗಿ ಸದರಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದೇ?

ಇ) ಹಾಗಿದ್ದಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗುವುದು?

ಶ್ರೀ ಪಿ.ಜಿ.ಆರ್.ಸಿಂಧ್ಯ (ಸಾರಿಗೆ ಸಚಿವರು):

ಅ) ದಿನಾಂಕ: 19-8-97ಕ್ಕೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯಲ್ಲಿ (ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯನ್ನು ಹೊರತು ಪಡಿಸಿ) ಕಾರ್ಯ ನಿರ್ವಹಿಸುತ್ತಿರುವ ಚಾಲಕ:ನಿರ್ವಾಹಕರ ಸಂಖ್ಯೆಯನ್ನು ಈ ಕೆಳಗಿನಂತೆ ಮಂಡಿಸಲಾಗಿದೆ.

ನಿರ್ವಾಹಕರು	:	16803
ಚಾಲಕರು	:	16893
ಒಟ್ಟು		**33696**

ಆ) ಪ್ರಸ್ತುತ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಚಾಲಕ ಹುದ್ದೆಯಲ್ಲಿ 515 ಖಾಲಿ ಸ್ಥಾನಗಳನ್ನು ನಿರ್ವಾಹಕ ಹುದ್ದೆಯಲ್ಲಿ 134 ಖಾಲಿ ಸ್ಥಾನಗಳನ್ನು ಹೊಂದಿದ್ದು ನೇರ ನೇಮಕಾತಿ ಮೂಲಕ ಈ ಹುದ್ದೆಗಳನ್ನು ತುಂಬಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ಇ) 'ಆ' ಪ್ರಶ್ನೆಯಲ್ಲಿ ಉತ್ತರಿಸಲಾಗಿದೆ.

ವಿಷಯ: ಕೋರಮಂಗಲದ ಗೃಹ ಮಂಡಳಿಯ ಫ್ಲಾಟ್‌ಗಳ ಹಂಚಿಕೆ.

2672 (3302)